FEBRUARY 20, 2025

AKASHAVANI - DHARWAD

PRADESH SAAMACHARA (KANNADA) 12 P.M

<><><>

ರಾಜ್ಯದಲ್ಲಿ 11 ಸಾವಿರದ 70 ಕೆರೆಗಳನ್ನು ಸುಭದ್ರಗೊಳಿಸುವ ಮೂಲಕ ಅಂತರ್ಜಲ ಮಟ್ಟದ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವರಾದ ಎನ್.ಎಸ್.ಭೋಸರಾಜು ಹೇಳಿದ್ದಾರೆ. ರಾಯಚೂರು ನಗರದ ಸಚಿವರ ಕಾರ್ಯಾಲಯದ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವಲಿ ಜಲಾಶಯದ ನಿರ್ಮಾಣಕ್ಕಾಗಿ ಆಂಧ್ರ ಮತ್ತು ತೆಲಂಗಾಣ ರಾಜ್ಯದ ಮುಖ್ಯಮಂತ್ರಿಗಳಿಗೆ ಈಗಾಗಲೇ ಪತ್ರ ಬರೆದು ಜಂಟಿ ಸಭೆಗೆ ಕೋರಲಾಗಿದೆ. ಮೂರು ರಾಜ್ಯಗಳ ಪ್ರತಿನಿಧಿಗಳ ಸಭೆಯ ಬಳಿಕ ನವಲಿ ಜಲಾಶಯ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗುತ್ತದೆ ಎಂದರು.

<><><>

ಭೂ ಮಾಪನ ಕಾರ್ಯವನ್ನು ನಿಖರ, ವೈಜ್ಞಾನಿಕ ಹಾಗೂ ವೇಗವಾಗಿ ನಿಭಾಯಿಸಲು, ಆಧುನಿಕ ತಂತ್ರಜ್ಞಾನದ "ರೋವರ್" ಉಪಕರಣ ಒದಗಿಸಲಾಗಿದೆ ಎಂದು, ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ ತಿಳಿಸಿದ್ದಾರೆ. ಬೆಂಗಳೂರಿನ ಭೂ ಮಾಪನ ಇಲಾಖೆ ಕಚೇರಿಯಲ್ಲಿ, 465 ರೋವರ್ ಉಪಕರಣ ವಿತರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಡ್ರೋನ್ ಮೂಲಕ ಕೈಗೊಂಡ ಸರ್ಮೀಕ್ಷೆ ಕಾರ್ಯ, 21 ಜಿಲ್ಲೆ ಹಾಗೂ 21 ಸಾವಿರದ 7 ನೂರಾ 10 ಗ್ರಾಮಗಳಲ್ಲಿ, ಪೂರ್ಣಗೊಂಡಿದೆ. ಶೀಘ್ರ ಸ್ವಾಮಿತ್ವ ಕಾರ್ಡ್ ವಿತರಿಸಲಾಗುವುದು ಎಂದರು.

<><><>

ಸಂಸದರ ಸಾಂಸ್ಕೃತಿಕ ಮಹೋತ್ಸವದ ಅಂಗವಾಗಿ, ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ ಅವರು, ಇಂದು ಹುಬ್ಬಳ್ಳಿಯ ಕುಸುಗಲ್ ರಸ್ತೆಯ, ಆಕ್ಸ್‌ಫರ್ಡ್ ಕಾಲೇಜು ಹಿಂಭಾಗದ ಮೈದಾನದಲ್ಲಿ, ಅಂತಾರಾಷ್ಟ್ರೀಯ ಗಾಳಿಪಟ ಉತ್ಸವಕ್ಕೆ ಚಾಲನೆ ನೀಡಿದರು. ನಾಳೆ ಬೆಳಗ್ಗೆ 9.30ಕ್ಕೆ, ದೇಶ–ವಿದೇಶಗಳ ಹೆಸರಾಂತ ಗಾಳಿಪಟ ಹಾರಾಟ ತಜ್ಞರು ಪ್ರದರ್ಶನ ನೀಡಲಿದ್ದಾರೆ. ಪ್ರದೇಶ ಸಮಾಚಾರಕ್ಕಾಗಿ ಬಾಲ ಪ್ರತಿಭೆ, ಗಾಯಕಿ, ಹುಬ್ಬಳ್ಳಿಯ ಮಹನ್ಯಾ ಪಾಟೀಲ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಮಹನ್ಯಾ ಪಾಟೀಲ – ಧ್ವನಿ 25 ಸೆಕೆಂದುಗಳು

<><><>

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಹಾಗೂ ಆಕಾಶವಾಣಿ ಎ ಶ್ರೇಣಿ ಸಂಗೀತ ಕಲಾವಿದರಾಗಿದ್ದ ಶೋಭಾ ರಾಘವೇಂದ್ರ ಹೂಯಿಲಗೋಳ ಇಂದು ಬೆಳಗ್ಗೆ ನಿಧನರಾಗಿದ್ದಾರೆ. ಅವರಿಗೆ 81 ವರ್ಷ ವಯಸ್ಸಾಗಿತ್ತು. ಇವರ ನಿಧನಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಸೇರಿದಂತೆ ಹಲವಾರು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ. ಪಾರ್ಥೀವ ಶರೀರದ ಅಂತ್ಯಕ್ರಿಯೆ ಗದಗ ಜಿಲ್ಲೆಯ ಹುಯಿಲಗೋಳ ಗ್ರಾಮದಲ್ಲಿ ಇಂದು ಮಧ್ಯಾಹ್ನ ಜರುಗಲಿದೆ.

<><><>

ಸಮಾಜದಲ್ಲಿ ನಡೆಯುವ ಚಟುವಟಿಕೆಗಳು, ಪ್ರಚಲಿತ ವಿದ್ಯಮಾನಗಳ ಕುರಿತು ನಾಟಕಗಳು ನೋಡುಗರಿಗೆ ಪಾಠವನ್ನು ಕಲಿಸುವಲ್ಲಿ ಪ್ರಭಾವಶಾಲಿಯಾಗಿವೆ ಎಂದು ಹಿರಿಯ ಸಾಹಿತಿ ಸತೀಶ ಕುಲಕರ್ಣಿ ಹೇಳಿದ್ದಾರೆ. ರಂಗಾಯಣ ಧಾರವಾಡ ಪಂಡಿತ ಬಸವರಾಜ ರಾಜಗುರು ಬಯಲು ರಂಗ ಮಂದಿರದಲ್ಲಿ ಆಯೋಜಿಸಿದ್ದ 'ರಂಗಾಂತರಂಗ –2025 ಬಹು ಭಾಷಾ ನಾಟಕೋತ್ಸವದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಕಲೆಗಳಿಗೆ ಸಾವಿಲ್ಲ. ಅವು ಮುಂದಿನ ಪೀಳಿಗೆಗೂ ವಿಸ್ತರಿಸುತ್ತಾ ಜೀವಂತ ಸ್ವರೂಪವನ್ನು ಪಡೆಯುತ್ತವೆ ಎಂದರು.

<><><>

ದಕ್ಷಿಣ ಕನ್ನಡ ಜಿಲ್ಲೆಯ ಪಿಲಿಕುಳದ ಡಾಕ್ಟರ್ ಶಿವರಾಮ ಕಾರಂತ ನಿಸರ್ಗಧಾಮದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿ 10 ಇಲಾಖೆಗಳಿಂದ ಒಟ್ಟು 165 ಕೋಟಿ ರೂಪಾಯಿಗಳ ಪ್ರಸ್ತಾವ ಸಲ್ಲಿಸಲಾಗಿದೆ ಎಂದು ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನಾ ರಚನಾ ಸಮಿತಿಯ ಅಧ್ಯಕ್ಷ ಬಿ.ಶಿವಣ್ಣ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಿಲಿಕುಳ ನಿಸರ್ಗಧಾಮವನ್ನು ರಾಜ್ಯದ ಆಕರ್ಷಣೀಯ ಪ್ರವಾಸಿ ತಾಣವನ್ನಾಗಿಸುವ ನಿಟ್ಟಿನಲ್ಲಿ, ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ, ಇಲಾಖಾವಾರು ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಸಭೆ ನಡೆಸಿ, ಅಲ್ಲಿನ ವರದಿ ಆಧಾರದಲ್ಲಿ ವಿವಿಧ ಇಲಾಖೆಗಳ ಸಚಿವರ ಜತೆ, ಸಾಧಕ ಬಾಧಕಗಳನ್ನು ಚರ್ಚಿಸಿ, ಬಳಿಕ ಮುಖ್ಯಮಂತ್ರಿ ಮಟ್ಟದಲ್ಲಿ ಸಭೆ ನಡೆಸಿ, ಅಗತ್ಯ ಅನುದಾನ ಒದಗಿಸಲು ಕ್ರಮ ವಹಿಸಲಾಗುವುದು. ಪಿಲಿಕುಳದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ವೇತನ ಹೆಚ್ಚಳದ ಬಗ್ಗೆಯೂ ಗಮನ ಹರಿಸಲಾಗಿದೆ ಎಂದು ತಿಳಿಸಿದರು.

<><><>

ಕರಾವಳಿ ಕರ್ನಾಟಕದ ಕಡಲ ತೀರವನ್ನು ಮ್ಯಾಪಿಂಗ್ ಮಾಡಿ, ವಿವಿಧ ವಲಯಗಳನ್ನಾಗಿಸಿ, ಅವುಗಳಿಗೆ ಪೂರಕವಾಗಿ ಪ್ರವಾಸೋದ್ಯಮ ಅಭಿವೃದ್ಧಿಗೆ ಕಾರ್ಯಯೋಜನೆ ರೂಪಿಸಲು ಉದ್ದೇಶಿಸಲಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸಲ್ಮಾ.ಕೆ. ಫಹೀಂ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಕೋಸ್ಟಲ್ ಕರ್ನಾಟಕ ಟೂರಿಸಂ ಡೆವಲಪ್‌ಮೆಂಟ್ ಕೌನ್ಸಿಲ್ ಮತ್ತು ಪ್ರವಾಸೋದ್ಯಮ ಇಲಾಖೆಯ ವತಿಯಿಂದ ನಡೆದ ಕೋಸ್ಟಲ್ ಕರ್ನಾಟಕ ಟೂರಿಸಂ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಪ್ರವಾಸೋದ್ಯಮ ಇಲಾಖೆಯಿಂದ ಕರಾವಳಿ ಕರ್ನಾಟಕ ಪ್ರವಾಸೋದ್ಯಮದ ಬೆಳವಣಿಗೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ. ಸುಮಾರು 321 ಕಿಲೋ ಮೀಟರ್ ಕರ್ನಾಟಕ ಕರಾವಳಿಯ ತೀರವನ್ನು ಮತ್ತಷ್ಟು ಅಭಿವೃದ್ಧಿ ಪಡಿಸಲು ಅವಕಾಶವಿದೆ ಎಂದರು.

<><><>

ಜೈವಿಕ ಇಂಧನ ನೀತಿ – 2009 ರೂಪಿಸಿ, ಅನು ಷ್ಠಾನಗೊಳಿಸಿದ ಮೊಟ್ಟ ಮೊದಲ ರಾಜ್ಯ, ಕರ್ನಾಟಕ ಎಂದು, ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ. ಸುಧೀಂದ್ರ ತಿಳಿಸಿದ್ದಾರೆ. ಮೈಸೂರು ನ್ಯಾಶನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಆಯೋಜಿಸಿದ್ದ, ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ, ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>